# ಜಾಗತಿಕ ಸ್ಪರ್ಧೆ ವಾತಾವರಣ ಸೃಷ್ಟಿಸಿ



**ಬೆಂಗಳೂರು:** ಉನ್ನತ ಶಿಕ್ಷಣ ಮತ್ತು ಸಂಶೋಧನಾ ಕ್ಷೇತ್ರಗಳಲ್ಲಿನ ಹೆಚ್ಚಿನ ಅಧ್ಯಯನಕ್ಕಾಗಿ ದೇಶದ ವಿದ್ಯಾರ್ಥಿಗಳು ಪಾಶ್ಚಾತ್ಯ ರಾಷ್ಟ್ರಗಳಿಗೆ ವಲಸೆ ಹೋಗುತ್ತಿದ್ದಾರೆ. ವಿದ್ಯಾರ್ಥಿಗಳು ನಮ್ಮಲ್ಲಿಯೇ ಕಲಿಯುವ ಅವಕಾಶ ಕಲ್ಪಿಸುವುದಕ್ಕಾಗಿ ದೇಶದಲ್ಲಿರುವ ಪ್ರತಿ ಶಿಕ್ಷಣ ಸಂಸ್ಥೆಗಳು ವಿಶ್ವದರ್ಜೆಯ ಕಲಿಕಾ ಕೇಂದ್ರಗಳಾಗಬೇಕಿದೆ ಎಂದು ರಾಷ್ಟ್ರಪತಿ ದ್ರೌಪತಿ ಮುರ್ಮು ಕರೆ ನೀಡಿದರು.

ಬೆಂಗಳೂರು ಜೆಸ್ಯೂಟ್ ಎಜುಕೇಷನಲ್ ಸೊಸೈಟಿಯು ಲಾಲ್‌ಬಾಗ್ ರಸ್ತೆಯಲ್ಲಿರುವ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ದಶಕಗಳಲ್ಲಿ ಭಾರತವು ವಿಶ್ವದಲ್ಲಿಯೇ ಅತಿ ಹೆಚ್ಚು ಯುವ ಜನರನ್ನು ಹೊಂದಿರುವ ರಾಷ್ಟ್ರವಾಗಲಿದೆ. ಈ ನಿಟ್ಟಿನಲ್ಲಿ ದೇಶದ ಭವಿಷ್ಯ ಮತ್ತು ಯುವ ಜನರ ಭವಿಷ್ಯದ ದೃಷ್ಟಿಯಿಂದ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವ ಸಾಮರ್ಥ್ಯ ಹಾಗೂ ಅವಕಾಶಗಳನ್ನು ಶಿಕ್ಷಣ ಸಂಸ್ಥೆಗಳು ಕಲ್ಪಿಸಬೇಕಿದೆ ಎಂದರು.

ಭಾರತದ ಹಲವು ಶಿಕ್ಷಣ ಸಂಸ್ಥೆಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸ್ಥಾನ ಪಡೆದಿದ್ದರೂ ಅದರ ಸಂಖ್ಯೆ ತೀರಾ ಸಣ್ಣದಿದೆ. ಆದ್ದರಿಂದ ಜಾಗತಿಕ ಮಟ್ಟದಲ್ಲಿ ವಿದ್ಯಾರ್ಥಿಗಳು ಸ್ಪರ್ಧಿಸುವಂತಹ ವಾತಾವರಣವನ್ನು ಸೃಷ್ಟಿಸುವ ಪರಿಶ್ರಮವನ್ನು ನಮ್ಮ ವಿಶ್ವವಿದ್ಯಾಲಯಗಳಲ್ಲಿ ಕಂಡುಬರಬೇಕು ಎಂದು ಹೇಳಿದರು.

ವಿಜ್ಞಾನ ಮತ್ತು ಗಣಿತದ ಜತೆಗೆ ಕಲೆ ಮತ್ತು ಕರಕುಶಲ, ಮಾನವಿಕತೆ, ಕ್ರೀಡೆ ಮತ್ತು ಫಿಟ್‌ನೆಸ್, ಭಾಷೆ ಮತ್ತು ಸಾಹಿತ್ಯ, ಸಂಸ್ಕೃತಿ ಮತ್ತು ಮೌಲ್ಯಗಳನ್ನು ಒಳಗೊಂಡಿರುವ ಸಮಗ್ರ ಪಠ್ಯಕ್ರಮವು ವಿದ್ಯಾರ್ಥಿಗಳ ಸರ್ವತೋಮುಖ ಸಾಮರ್ಥ್ಯ ಅಭಿವೃದ್ಧಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ರಾಷ್ಟ್ರಪತಿಗಳ ಉಪಸ್ಥಿತಿಯಿಂದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಹಾಗೂ ಮಾರ್ಗದರ್ಶನ ದೊರೆತಂತಾಗಿದೆ. ಶಿಕ್ಷಣ ಸಂಸ್ಥೆಯನ್ನು ವಿಶ್ವವಿದ್ಯಾಲಯವನ್ನಾಗಿ ಮಾಡುವ ಕಾರ್ಯಕ್ರಮದಡಿ ರಾಜ್ಯ ಸರ್ಕಾರ ಸೇಂಟ್ ಜೋಸೆಫ್ ಪ್ರಥಮವಾಗಿ ಆಯ್ಕೆ ಮಾಡಿದ್ದು ಸಂಸ್ಥೆಯ ಅಭಿವೃದ್ಧಿಗೆ ಪೂರಕವಾಗಲಿದೆ. ಸೇಂಟ್ ಜೋಸೆಫ್ ಶಿಕ್ಷಣ ಸಂಸ್ಥೆಯ ಶಿಕ್ಷಣ ಸೇವೆ ನಿರಂತರವಾಗಿ ಸಾಗಲಿ ಎಂದು ಹಾರೈಸಿದರು.

## ಯುವಜನರಿಗೆ ಅಪಾರ ಅವಕಾಶ

ಉದ್ಯೋಗಕ್ಕೆ ಬೇಕಾದ ಪರಿಣಾಮಕಾರಿ ಕೌಶಲ್ಯ ಹಾಗೂ ಬೇಡಿಕೆಗೆ ತಕ್ಕಂತೆ ಬಹುಶಿಸ್ತೀಯ ಕಲೆಯನ್ನು ಒಳಗೊಂಡಿದ್ದರೆ, ಇಂದಿನ ಆಧುನಿಕ ಹಾಗೂ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯುವಕರಿಗೆ ಹತ್ತಾರು ಕ್ಷೇತ್ರಗಳಲ್ಲಿ ಸಾಕಷ್ಟು ಅವಕಾಶಗಳಿವೆ. ಇದನ್ನು ಬಳಸಿಕೊಳ್ಳಲು ಯುವಕರು ಮುಂದಾಗಬೇಕು ಎಂದು ರಾಷ್ಟ್ರಪತಿ ಮುರ್ಮು ಹೇಳಿದರು.

ಶಿಕ್ಷಣ ಸಂಸ್ಥೆಗಳು ಜ್ಞಾನದ ಕೇಂದ್ರಗಳಾಗಿದ್ದು ಮಾನವೀಯ ಹಾಗೂ ಸರಳ ವ್ಯಕ್ತಿತ್ವವನ್ನು ತನ್ನ ವಿದ್ಯಾರ್ಥಿಗಳಲ್ಲಿ ತುಂಬಬೇಕು. ವ್ಯಕ್ತಿತ್ವ ವಿಕಸನಗೊಳಿಸುವ ಕೆಲಸವನ್ನು ವಿದ್ಯಾಸಂಸ್ಥೆಗಳು ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹಲೋತ್, ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥನಾರಾಯಣ, ಬೆಂಗಳೂರು ಆರ್ಚ್ ಬಿಷಪ್ ಡಾ.ಪೀಟರ್ ಮಚಾದೋ, ಸೇಂಟ್ ಜೋಸೆಫ್ ವಿವಿಯ ಕುಲಾಧಿಪತಿ ಡಿಯೋನೈಸಿಯಸ್ ವಾಜ್ ಉಪಸ್ಥಿತರಿದ್ದರು.